# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(2)ಪಿಆರ್/98/2022-23

ಮುಖ್ಯ ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 27/10/2022.

## ಸುತ್ತೋಲೆ

ವಿಷಯ: 2022ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ನಡೆಯುವ ಕೋಟಿ ಕಂಠ ಗಾಯನ ಕಾರ್ಯಕ್ರಮದಲ್ಲಿ ಪಾಲಿಕೆಯ ಎಲ್ಲಾ ಅಧಿಕಾರಿ / ನೌಕರರು ಭಾಗವಹಿಸುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 67ನೇ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ದಿನಾಂಕ: 28-10-2022 ರಂದು ಬೆಳಿಗ್ಗೆ 11.00 ಘಂಟೆಗೆ ಸರಿಯಾಗಿ ಕೋಟಿ ಕಂಠ ಗಾಯನ ಕಾರ್ಯಕ್ರಮವು ಗ್ರಾಮ, ರಾಜ್ಯ, ರಾಷ್ಟ್ರ ಹಾಗೂ ಹೊರದೇಶದಲ್ಲಿ ಏಕಕಾಲದಲ್ಲಿ ಮೊಳಗಲಿದ್ದು, ಈ ವಿನೂತನ ಕಾರ್ಯಕ್ರಮವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸಂಪೂರ್ಣವಾಗಿ ಯಶಸ್ವಿಗೊಳಿಸುವ ಸಂಬಂಧ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳು, ಇಲಾಖಾ ಮುಖ್ಯಸ್ಥರುಗಳು ಮತ್ತು ನೌಕರರುಗಳು **ಪಾಲಿಕೆಯ ಕೇಂದ್ರ ಕಛೇರಿಯ ಆವರಣದಲ್ಲಿ ದಿನಾಂಕ: 28-10-2022 ರಂದು ಬೆಳಿಗ್ಗೆ 10.00 ಘಂಟೆಗೆ** ಹಾಜರಾಗಿ, ಕೋಟಿ ಕಂಠ ಗಾಯನ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸಲು ಸೂಚಿಸುವಂತೆ ಮಾನ್ಯ ಮುಖ್ಯ ಆಯುಕ್ತರವರಿಂದ ನಿರ್ದೇಶಿಸಲ್ಪಟ್ಟಿರುತ್ತೇನೆ.

ಮಾನ್ಯ ಮುಖ್ಯ ಆಯುಕ್ತರವರ ಆದೇಶದಂತೆ)

27/10/22
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಎಲ್ಲಾ ವಿಶೇಷ ಆಯುಕ್ತರವರುಗಳ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯಗಳ ಅಪರ / ಜಂಟಿ ಆಯುಕ್ತರವರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.
: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಮುಲೆಅ/ಮುಲೆಪ/ಎಲ್ಲಾ ವಲಯದ ಉ.ನಿ (ಹಣಕಾಸು) ರವರುಗಳಿಗೆ ಕಳುಹಿಸಿದೆ.
: ಕಛೇರಿ ಪ್ರತಿ.

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ – ಕೋಟಿ ಕಂಠ ಗಾಯನದ ಹಾಡುಗಳು

1

**ಜಯ ಭಾರತ ಜನನಿಯ ತನುಜಾತೆ**

ಜಯ ಭಾರತ ಜನನಿಯ ತನುಜಾತೆ, ಜಯ ಹೇ ಕರ್ನಾಟಕ ಮಾತೆ!
ಜಯ ಸುಂದರ ನದಿ ವನಗಳ ನಾಡೇ, ಜಯ ಹೇ ರಸಋಷಿಗಳ ಬೀಡೆ!
ಭೂದೇವಿಯ ಮಕುಟದ ನವಮಣಿಯೆ, ಗಂಧದ ಚಂದದ ಹೊನ್ನಿನ ಗಣಿಯೆ;
ರಾಘವ ಮಧುಸೂಧನರವತರಿಸಿದ ಭಾರತ ಜನನಿಯ ತನುಜಾತೆ !

ಜನನಿಯ ಜೋಗುಳ ವೇದದ ಘೋಷ, ಜನನಿಗೆ ಜೀವವು ನಿನ್ನಾವೇಶ
ಹಸುರಿನ ಗಿರಿಗಳ ಸಾಲೇ, ನಿನ್ನಯ ಕೊರಳಿನ ಮಾಲೆ
ಕಪಿಲ ಪತಂಜಲ ಗೌತಮ ಜಿನನುತ, ಭಾರತ ಜನನಿಯ ತನುಜಾತೆ !

ಶಂಕರ ರಾಮಾನುಜ ವಿದ್ಯಾರಣ್ಯ, ಬಸವೇಶ್ವರ ಮಧ್ವರ ದಿವ್ಯಾರಣ್ಯ
ರನ್ನ ಷಡಕ್ಷರಿ ಪೊನ್ನ, ಪಂಪ ಲಕುಮಿಪತಿ ಜನ್ನ
ಕುಮಾರವ್ಯಾಸನ ಮಂಗಳ ಧಾಮ, ಕವಿ ಕೋಗಿಲೆಗಳ ಪುಣ್ಯಾರಾಮ
ನಾನಕ ರಾಮಾನಂದ ಕಬೀರರ ಭಾರತ ಜನನಿಯ ತನುಜಾತೆ !

ತೈಲಪ ಹೊಯ್ಸಳರಾಳಿದ ನಾಡೇ, ಡಂಕಣ ಜಕಣರ ನಚ್ಚಿನ ಬೀಡೆ
ಕೃಷ್ಣ ಶರಾವತಿ ತುಂಗ, ಕಾವೇರಿಯ ವರ ರಂಗ
ಚೈತನ್ಯ ಪರಮಹಂಸ ವಿವೇಕರ, ಭಾರತ ಜನನಿಯ ತನುಜಾತೆ !

ಸರ್ವ ಜನಾಂಗದ ಶಾಂತಿಯ ತೋಟ, ರಸಿಕರ ಕಂಗಳ ಸೆಳೆಯುವ ನೋ
ಹಿಂದೂ ಕ್ರೈಸ್ತ ಮುಸಲ್ಮಾನ, ಪಾರಸಿಕ ಜೈನರುದ್ಯಾನ
ಜನಕನ ಹೋಲುವ ದೊರೆಗಳ ಧಾಮ, ಗಾಯಕ ವೈಣಿಕರಾರಾಮ
ಕನ್ನಡ ನುಡಿ ಕುಣಿದಾಡುವ ಗೇಹ, ಕನ್ನಡ ತಾಯಿಯ ಮಕ್ಕಳ ದೇಹ
ಭಾರತ ಜನನಿಯ ತನುಜಾತೆ, ಜಯ ಹೇ ಕರ್ನಾಟಕ ಮಾತೆ

2

**ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು**

ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು
ಬದುಕು ಬಲುಹಿನ ನಿಧಿಯು ಸದಭಿಮಾನದ ಗೂಡು ॥ ಪ ॥

ರಾಜನ್ಯರಿಪು ಪರಶುರಾಮನಮ್ಮನ ನಾಡು
ಆ ಜಲಧಿಯನೆ ಜಿಗಿದ ಹನುಮನುದಿಸಿದ ನಾಡು
ಓಜೆಯಿಂ ಮೆರೆದರಸುಗಳ ಸಾಹಸದ ಸೂಡು
ತೇಜವನು ನಮಗೀವ ವೀರವೃಂದದ ಬೀಡು ॥ 1 ॥

ಲೆಕ್ಕಿಗ ಮಿತಾಕ್ಷರರು ಬೆಳೆದು ಮೆರೆದಿಹ ನಾಡು
ಜಕ್ಕಣನ ಶಿಲ್ಪ ಕಲೆಯಚ್ಚರಿಯ ಕರುಗೋಡು
ಚೊಕ್ಕಮತಗಳ ಸಾರಿದವರಿಗಿದು ನೆಲೆವೀಡು
ಬೊಕ್ಕಸದ ಕಣಜವೈ ವಿದ್ವತ್ತೆಗಳ ಕಾಡು ॥ 2 ॥

ಪಾವನೆಯರಾ ಕೃಷ್ಣೆ ಭೀಮೆಯರ ತಾಯ್ನಾಡು
ಕಾವೇರಿ ಗೋದೆಯರು ಮೈದೊಳೆವ ನಲುನಾಡು
ಅವಗಂ ಸ್ಫೂರ್ತಿಸುವ ಕಬ್ಬಿಗರ ನಡೆಮಾಡು
ಕಾವ ಗದುಗಿನ ವೀರನಾರಾಯಣನ ಬೀಡು॥ 3 ॥

3

**ಬಾರಿಸು ಕನ್ನಡ ಡಿಂಡಿಮವ**

ಬಾರಿಸು ಕನ್ನಡ ಡಿಂಡಿಮವ
ಓ ಕರ್ನಾಟಕ ಹೃದಯ ಶಿವ
ಬಾರಿಸು ಕನ್ನಡ ಡಿಂಡಿಮವ

ಸತ್ತಂತಿಹರನು ಬಡಿದೆಚ್ಚರಿಸು
ಕಚ್ಚಾಡುವರನು ಕೂಡಿಸಿ ಒಲಿಸು
ಹೊಟ್ಟೆಯ ಕಿಚ್ಚಿಗೆ ಕಣ್ಣೀರ್ ಸುರಿಸು
ಒಟ್ಟಿಗೆ ಬಾಳುವ ತೆರದಲಿ ಹರಸು

ಕ್ಷಯಿಸೆ ಶಿವೇತರ ಕೃತಿ ಕೃತಿಯಲ್ಲಿ
ಮೂಡಲಿ ಮಂಗಳ ಮತಿ ಮತಿಯಲ್ಲಿ
ಕವಿ ಋಷಿ ಸಂತರ ಆದರ್ಶದಲಿ
ಸರ್ವೋದಯವಾಗಲಿ ಸರ್ವರಲಿ

ಬಾರಿಸು ಕನ್ನಡ ಡಿಂಡಿಮವ
ಓ ಕರ್ನಾಟಕ ಹೃದಯ ಶಿವ
ಬಾರಿಸು ಕನ್ನಡ ಡಿಂಡಿಮವ

4

**ಹಚ್ಚೇವು ಕನ್ನಡದ ದೀಪ**

ಹಚ್ಚೇವು ಕನ್ನಡದ ದೀಪ
ಕರುನಾಡದೀಪ ಸಿರಿನುಡಿಯದೀಪ
ಒಲವೆತ್ತಿ ತೋರುವಾ ದೀಪ । ಹಚ್ಚೇವು ।

ಬಹುದಿನಗಳಿಂದ ಮೈಮರೆವೆಯಿಂದ
ಕೂಡಿರುವ ಕೊಳೆಯ ಕೊಚ್ಚೇವು
ಎಲ್ಲೆಲ್ಲಿ ಕನ್ನಡದ ಕಂಪು
ಸೂಸಲಲ್ಲಲ್ಲಿ ಕರಣ ಚಾಚೇವು
ನಡು ನಾಡೆ ಇರಲಿ, ಗಡಿನಾಡೆ ಇರಲಿ

ಕನ್ನಡದ ಕಳೆಯ ಕೆಚ್ಚೇವು
ಮರತೇವು ಮರವ, ತೆರೆದೇವು ಮನವ,
ಎರೆದೇವು ಒಲವಹಿರಿ ನೆನಪ
ನರನರವನೆಲ್ಲ ಹುರಿಗೊಳಿಸಿ ಹೊಸೆದು
ಹಚ್ಚೇವು ಕನ್ನಡದ ದೀಪ
ಕಲ್ಪನೆಯ ಕಣ್ಣು ಹರಿವನಕ ಸಾಲು
ದೀಪಗಳ ಬೆಳಕ ಬೀರೇವು
ಹಚ್ಚಿರುವ ದೀಪದಲಿ ತಾಯ ರೂಪ
ಅಚ್ಚಳಿಯದಂತೆ ತೋರೇವು
ಒಡಲೊಡಲ ಕೆಚ್ಚಿನಾ ಕಿಡಿಗಳನ್ನು
ಗಡಿನಾಡಾಚೆ ತೂರೇವು
ಹೊಮ್ಮಿರಲು ಪ್ರೀತಿ ಎಲ್ಲಿಯದು ಭೀತಿ?
–ನಾಡೊಲವೆ ನೀತಿ ಹಿಡಿ ನೆನಪ
ಮನೆಮನೆಗಳಲ್ಲಿ ಮನಮನಗಳಲ್ಲಿ
ಹಚ್ಚೇವು ಕನ್ನಡದ ದೀಪ.

ಕರುನಾಡಿನರಿವ ನೆರೆತೀವಿ ಭಾವದಲಿ
ಜೀವನಾಡಿ ನುಡಿಸೇವು
ತೆರೆತೆರೆದ ಕಣ್ಣಿನಲಿ ನೇಹವೆರೆದು
ನವ ಜ್ಯೋತಿಯನ್ನೆ ಮುಡಿಸೇವು
ನಮ್ಮನ್ನವುಂಡು ಅನ್ಯಾಯಗೈಯು
ವಂಥವರ ಹುಚ್ಚ ಬಿಡಿಸೇವು
ಇಹುದೆಮಗೆ ಛಲವು,
ಕನ್ನಡರ ಬಲವು ಕನ್ನಡದ ಒಲವು ಹಿಡಿನೆನವು
ನಮ್ಮದೆಯ ಕೆಚ್ಚುನೆಚ್ಚುಗಳನೂಡಿ
ಹಚ್ಚೇವು ಕನ್ನಡದ ದೀಪ.

ನಮ್ಮವರು ಗಳಿಸಿದಾ ಹೆಸರ
ಉಳಿಸಲೆಲ್ಲಾರು ಒಂದುಗೂಡೇವು
ನಮ್ಮದೆಯ ಮಿಡಿಯುವೀ ಮಾತಿನಲ್ಲಿ
ಮಾತೆಯನು ಪೂಜೆ ಮಾಡೇವು
ನಮ್ಮುಸಿರು ತೀಡುವೀ ನಾಡಿನಲ್ಲಿ
ಮಾಂಗಲ್ಯಗೀತ ಹಾಡೇವು
ತೊರೆದೇವು ಮರುಳ, ಕಡೆದೇವು ಇರುಳ
ಪಡೆದೇವು ತಿರುಳ ಹಿಡಿನೆನಪ
ಕರುಳೆಂಬ ಕುಡಿಗೆ ಮಿಂಚನ್ನೆ ಮುಡಿಸಿ
ಹಚ್ಚೇವು ಕನ್ನಡದ ದೀಪ.

## 5

## ವಿಶ್ವ ವಿನೂತನ ವಿದ್ಯಾಚೇತನ

ವಿಶ್ವ ವಿನೂತನ ವಿದ್ಯಾ ಚೇತನ
ಸರ್ವ ಹೃದಯ ಸಂಸ್ಕಾರಿ ಜಯ ಭಾರತಿ ||

ಕರುನಾಡ ಸರಸ್ವತಿ
ಗುಡಿ ಗೋಪುರ ಸುರ ಶಿಲ್ಪ ಕಲಾಕೃತಿ
ಕೃಷ್ಣೆ ತುಂಗೆ ಕಾವೇರಿ
ಪವಿತ್ರಿತ ಕ್ಷೇತ್ರ ಮನೋಹಾರಿ ॥ ವಿಶ್ವ ||

ಗಂಗ ಕದಂಬ ರಾಷ್ಟ್ರಕೂಟ ಬಲ
ಚಾಲುಕ್ಯ ಹೊಯ್ಸಳ ಬಲ್ಲಾಳ
ಹಕ್ಕ ಬುಕ್ಕ ಪುಲಿಕೇಶಿ ವಿಕ್ರಮರ
ಚೆನ್ನಮ್ಮಾಜಿಯ ವೀರಶ್ರೀ ॥ ವಿಶ್ವ ||

ತ್ಯಾಗ ಭೋಗ ಸಮಯೋಗದ ದೃಷ್ಟಿ
ಬೆಳುವೊಲ ಮಲೆ ಕರೆ ಸುಫಲ ಸೃಷ್ಟಿ
ಜ್ಞಾನದ ವಿಜ್ಞಾನದ ಕಲೆಯೈಸಿರಿ
ಸಾರೋದಯ ಧಾರಾ ನಗರಿ ॥ ವಿಶ್ವ ||

ಅರಿವೆ ಗುರುನುಡಿ ಜ್ಯೋತಿರ್ಲಿಂಗ
ದಯವೇ ಧರ್ಮದ ಮೂಲ ತರಂಗ
ವಿಶ್ವ ಭಾರತಿಗೆ ಕನ್ನಡದಾರತಿ
ಮೊಳಗಲಿ ಮಂಗಲ ಜಯಭೇರಿ ॥ ವಿಶ್ವ ||

ವಿಶ್ವ ವಿನೂತನ ವಿದ್ಯಾ ಚೇತನ
ಸರ್ವ ಹೃದಯ ಸಂಸ್ಕಾರಿ ಜಯ ಭಾರತಿ ||

ಜಯ ಭಾರತಿ ॥
ಜಯ ಭಾರತಿ ॥
ಜಯ ಭಾರತಿ ॥

## 6

## ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು

ಹುಟ್ಟಿದರೆ ಕನ್ನಡ ನಾಡಲ್ ಹುಟ್ಟಬೇಕು,
ಮೆಟ್ಟಿದರೆ ಕನ್ನಡ ಮಣ್ಣ ಮೆಟ್ಟಬೇಕು ಬದುಕಿದು ಜಟಕಾಬಂಡಿ ,
ಇದು ವಿಧಿ ಓಡಿಸುವ ಬಂಡಿ,
ಬದುಕಿದು ಜಾಟಕಬಂಡಿ ವಿಧಿ ಅಲೆದಾಡಿಸುವ ಬಂಡಿ ॥ ಹುಟ್ಟಿದರೆ . . ॥

ಕಾಶಿಲಿ ಸ್ನಾನ ಮಾಡು, ಕಾಶ್ಮೀರ ಸುತ್ತಿ ನೋಡು,
ಜೋಗದ ಗುಂಡಿ ಒಡೆಯ ನಾನೆಂದೂ ಕೂಗಿ ಹಾಡೂ
ಅಜಂತಾ ಎಲ್ಲೋರನ ಬಾಳಲ್ಲಿ ಒಮ್ಮೆ ನೋಡು,
ಬಾದಾಮಿ ಈಹೊಳೆಯ ಚಂದನ ತೂಕ ಮಾಡು
ಕಳಿಯೋಕೆ ಕೋಟಿ ಭಾಷೆ ಆಡೋಕೆ ಒಂದೇ ಬಾಷೆ ಕನ್ನಡ . . ಕನ್ನಡ. .
ಕಸ್ತೂರಿ ಕನ್ನಡ ॥ಹುಟ್ಟಿದರೆ ॥

ಧ್ಯಾನಕ್ಕೆ ಭೂಮಿ ಇದು , ಪ್ರೇಮಕ್ಕೆ ಸ್ವರ್ಗ ಇದು,
ಸ್ನೇಹಕ್ಕೆ ಶಾಲೆ ಇದು , ಜ್ಞಾನಕ್ಕೆ ಪೀಟ ಇದು
ಕಾರ್ಯಕ್ಕೆ ಕಲ್ಪ ಇದು, ಶಿಲ್ಪಕ್ಕೆ ತಲ್ಪ ಇದು ,
ನಾಟ್ಯಕ್ಕೆ ನಾಡಿ ಇದು ನಾನಾಂತರಂಗವಿದು
ಕುವೆಂಪು ಬೇಂದ್ರೆಯಿಂದ ಕಾರಂತ ಮಾಸ್ತಿ ಇಂದ ಧನ್ಯವೀ ಕನ್ನಡ,
ಗೋಕಾಕಿನಾ ಕನ್ನಡಾ. . ॥ ಹುಟ್ಟಿದರೆ॥

ಬಾಳಿನ ಬೆನ್ನು ಹತ್ತಿ, ನೂರಾರು ಊರು ಸುತ್ತಿ,
ಏನೇನೋ ಕಂಡಮೇಲು ನಮ್ಮೂರೇ ನಮಗೆ ಮೇಲೂ
ಕೈಲಾಸಂ ಕಂಡ ನಮಗೆ ಕೈಲಾಸ ಯಾಕೆ ಬೇಕು,
ದಾಸರ ಕಂಡ ನಮಗೆ ವೈಕುಂಠ ಯಾಕೆ ಬೇಕು
ಮುಂದಿನ ನನ್ನ ಜನ್ಮ ಬರೆದಿಟ್ಟನಂತೆ ಬ್ರಹ್ಮಾ ಇಲ್ಲಿಯೇ, ಇಲ್ಲಿಯೇ,
ಎಂದಿಗು ನಾನಿಲ್ಲಿಯೇ... ॥ಹುಟ್ಟಿದರೆ ॥

## ಸಂಕಲ್ಪ ವಿಧಿ

**ಕನ್ನಡ ನಾಡಿನ ಪ್ರಜೆಯಾದ ನಾನು**

**ನನ್ನ ನಾಡು ನುಡಿಗಳನ್ನು ಪ್ರೀತಿಸುತ್ತೇನೆ**

**ಹಾಗೂ ಗೌರವಿಸುತ್ತೇನೆ.**

**ನಾನು ಕನ್ನಡದಲ್ಲೇ ಮಾತನಾಡುತ್ತೇನೆ,**

**ಕನ್ನಡದಲ್ಲೇ ಬರೆಯುತ್ತೇನೆ.**

**ಕನ್ನಡವನ್ನೇ ಬಳಸುತ್ತೇನೆ ಎಂಬ ಪಣ ತೊಡುತ್ತೇನೆ.**

**ಕನ್ನಡ ನಾಡು, ನುಡಿ, ಸಂಸ್ಕೃತಿ**

**ಹಾಗೂ ಪರಂಪರೆಯನ್ನು ಉಳಿಸಲು ಕಟಬದ್ಧನಾಗಿರುತ್ತೇನೆ.**

**ಕನ್ನಡ ನಾಡಿನಲ್ಲಿರುವ ಕನ್ನಡೇತರ ಬಂಧುಗಳಿಗೆ**

**ಕನ್ನಡ ಕಲಿಸುತ್ತೇನೆ ಎಂದು ಸಂಕಲ್ಪ ಮಾಡುತ್ತೇನೆ.**